ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) : ಮಾನ್ಯ ಅಧ್ಯಕ್ಷರೆ, ೨೦೦೭ರ ಕರ್ನಾಟಕ ತೆರಿಗೆ ಕಾನೂನುಗಳ (ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "೨೦೦೭ರ ಕರ್ನಾಟಕ ತೆರಿಗೆ ಕಾನೂನುಗಳ ತೆರಿಗೆ (ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಕರ್ನಾಟಕ ಸ್ಟಮಪು (ಮೂರನೇ ತಿದ್ದುಪಡಿ) ವಿಧೇಯಕ, ೨೦೦೭

ಪರ್ಯಾಲೋಚನಾ ಪ್ರಸ್ತಾವ

ಶ್ರೀ ಬಿ.ಎಸ್. ಯಡಿಯೂರಪಪ್ (ಉಪ ಮುಖ್ಯ ಮಂತ್ರಿಗಳು) (ಕಂದಾಯ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, ೨೦೦೭ರ ಕರ್ನಾಟಕ ಸ್ಟಾಂಪು (ಮೂರನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸಬೇಕೆಂದು ಕೋಡುರತ್ತೇವೆ.

ಪ್ರಸ್ತಾವವನ್ನು ಮಂಡಿಸಲಾಯಿತು

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "೨೦೦೭ರ ಕರ್ನಾಟಕ ಸ್ಟಾಂಪು (ಮೂರನೇ ತಿದ್ದುಪಡಿ) ವಿಧೇಯಕವನ್ನು ಪರ್ಯಾಲೋಚಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

ಖಂಡ ಖಂಡವಾಗಿ ವಿಧೇಯಕವನ್ನು ಪರ್ಯಾಲೋಚಿಸುವುದು

ಅಧ್ಯಕ್ಷರು : " ಖಂಡ ೨ ರಿಂದ ೪ ರವರೆಗೆ ಎರಡೂ ಸೇರಿದಂತೆ ಈ ವಿಧೇಯಕದ ಅಂಗವಾಗಿರುತ್ತದೆ"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಖಂಡ ೨ ರಿಂದ ೪ರವರೆಗೆ ಎರಡೂ ಸೇರಿದಂತೆ ವಿಧೇಯಕಕ್ಕೆ ಸೇರಿಸಲಾಯಿತು)

ಖಂಡ ೧ ಇತ್ಯಾದಿ :

ಅಧ್ಯಕ್ಷರು : ಪ್ರಸ್ತಾವ ಏನೆಮದರೆ, "ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ,ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕದ ಭಾಗವಾಗಿರುತ್ತದೆ.

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು

(ಮೊದಲನೆಯ ಖಂಡ, ದೀರ್ಘ ಶೀರ್ಷಿಕೆ, ಪ್ರಸ್ತಾವನೆ ಹಾಗೂ ಅಧಿನಿಯಮಗೊಳಿಸುವ ಸೂತ್ರ ಸಂಹಿತೆ ವಿಧೇಯಕಕ್ಕೆ ಸೇರಿಸಲಾಯಿತು)

ಪ್ರಸ್ತಾವ ಅಂಗೀಕಾರ

ಶ್ರೀ ಬಿ.ಎಸ್.ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು) (ಕಂದಾಯ ಸಚಿವರ ಪರವಾಗಿ) : ಮಾನ್ಯ ಅಧ್ಯಕ್ಷರೆ, ೨೦೦೭ರ ಕರ್ನಾಟಕ ಸ್ಟಾಂಪು (ಮೂರನೇ ತಿದ್ದುಪಡಿ) ವಿಧೇಯಕವನ್ನು ಅಂಗೀಕರಿಸಬೇಕೆಂದು ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ, "೨೦೦೭ರ ಕರ್ನಾಟಕ ಸ್ಟಾಂಪು (ಮೂರನೇ ತಿದ್ದುಪಡಿ) ವಿಧೇಯಕವನ್ನು ತಿದ್ದುಪಡಿ ಮಾಡಿರುವಂತೆ ಅಂಗೀಕರಿಸುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಮಸೂದೆಗೆ ಒಪ್ಪಿಗೆ ನೀಡಲಾಯಿತು.

ಅಧ್ಯಕ್ಷರು : ಈಗ ಸದನವನ್ನು ಮತ್ತೆ ೪.೩೦ ಗಂಟೆಗೆ ಸೇರುವಂತೆ ಮುಂದೂಡಲಾಗಿದೆ.

(ಸದನವು ಮಧ್ಯಾಹ್ನ ೩.೪೧ ಗಂಟೆಗೆ ಮುಕ್ತಾಯಗೊಂಡು ಪುನಃ ಸಾಯಂಕಾಲ ೪.೩೦ಕ್ಕೆ ಸಮಾವೇಶಗೊಳ್ಳುವುದು)